## ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 428/ 2019**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ವಿಶ್ವನಾಥ | ಫ್ರಾಸಾಃ **2** |
| ತಂದೆಯ ಹೆಸರುಃ | ದೊಡ್ಡರಂಗಣ್ಣ | ಚಾಸಾಃ **5** |
| ವಯಸ್ಸುಃ | **36** ವರ್ಷ | ದಿಃ **07-04-2026** |
| ಉದ್ಯೋಗಃ | ವ್ಯಾಪಾರ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ಚಾಸಾಃ 1 ರವರು ನನ್ನ ತಂದೆ ಹಾಗೂ ಚಾಸಾಃ 4 ರವರು ನನ್ನ ತಮ್ಮ ಆಗಿರುತ್ತಾರೆ. ನನಗೆ ಚಾಸಾಃ 6 ಮತ್ತು 7 ರವರ ಪರಿಚಯವಿಲ್ಲ. ನನಗೆ ನ್ಯಾಯಾಲಯದ ಮುಂದೆ ಇರುವ 1 ರಿಂದ 3 ನೇ ಆರೋಪಿತರ ಪರಿಚಯವಿದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಈ ಬಗ್ಗೆ ಪೊಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ

ದಿಃ 15-04-2016 ರಂದು ರಾಃ 10-45 ರಿಂದ 11.00 ಗಂಟೆ ಸಮಯದಲ್ಲಿ ಚಾಸಾಃ 4 ರವರು ಯಾದಗಿರಿ ರೈಲ್ವೆ ನೀಲ್ದಾಣದ ಅಂಕಣ 2 ರಿಂದ ಬರುತ್ತಿದ್ದಾಗ 1 ರಿಂದ 4 ನೇ ಆರೋಪಿತರು ಬಂದು ಅವರಿಗೆ ಅವಾಚ್ಯ ಶಬ್ದಗಳಿಂದ ಬೈದಿದ್ದರು ಎಂದರೆ ಸರಿಯಲ್ಲ. 1 ನೇ ಆರೋಪಿ ಚಾಸಾಃ 4 ರವರಿಗೆ ಕಬ್ಬಿಣದ ರಾಡಿನಿಂದ ತಲೆಗೆ ಹೊಡೆದಿದ್ದನು ಎಂದರೆ ಸರಿಯಲ್ಲ. 2 ರಿಂದ 4 ನೇ ಆರೋಪಿತರು ಚಾಸಾಃ 4 ರವರಿಗೆ ತಮ್ಮ ಕೈಗಳಿಂದ ಕಾಲಿಗೆ ಹೊಡೆದಿದ್ದರು ಎಂದರೆ ಸರಿಯಲ್ಲ. ನಾನು ಈ ಮೇಲಿನಂತೆ ಪೊಲಿಸರಿಗೆ ಹೇಳಿಕೆ ನೀಡಿದ್ದೇನು ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿತರೊಂದಿಗೆ ರಾಜಿ ಮಾಡಿಕೊಂಡ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರವಾಗಿಃ

ಆರೋಪಿ ಪರ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.